## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** 2021-22ನೇ ಸಾಲಿಗೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗಾಗಿ ವಿದ್ಯಾಸಿರಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:-**

1. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಪ್ರಸ್ತಾವನೆ ಸಂಖ್ಯೆ:ಹಿಂವಕಇ/ಲೇಶಾ/ಸಿಆರ್-1/2021-22, ದಿನಾಂಕ:04.01.2022.
2. ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 466 ಬಿಎಂಎಸ್ 2021 ದಿನಾಂಕ:21.01.2022.
3. ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 28 ಬಿಎಂಎಸ್ 2022 ದಿನಾಂಕ:07.02.2022.

******

**ಪ್ರಸ್ತಾವನೆ:-**

ಮೇಲೆ ಓದಲಾದ (1)ರ ಆಯುಕ್ತರ ಪ್ರಸ್ತಾವನೆಯಲ್ಲಿ 2021-22ನೇ ಸಾಲಿನ ಆಯವ್ಯಯದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಯೋಜನೆಯ ಲೆಕ್ಕ ಶೀರ್ಷಿಕೆ: 2225-03-283-0-03 (059)ರಡಿ ಒದಗಿಸಿರುವ ರೂ.150.00 ಕೋಟಿಗಳ ಅನುದಾನವನ್ನು ಬಿಡುಗಡೆಗೊಳಿಸುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (2)ರ ಆದೇಶದಲ್ಲಿ ಅಮೃತ ಸ್ಟಾರ್ಟ್ ಅಪ್ ಯೋಜನೆಯನ್ನು ಅನುಷ್ಠಾನಗೊಳಿಸಲು ಲೆಕ್ಕ ಶೀರ್ಷಿಕೆ: 2225-03-283-0-03 (059)ರಡಿ ರೂ.10.50 ಕೋಟಿಗಳನ್ನು ಆಯುಕ್ತರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ರವರು ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಗೆ ನಿಯಮಾನುಸಾರ ವರ್ಗಾಯಿಸಿ ಬಿಡುಗಡೆ ಮಾಡುವಂತೆ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ (3)ರ ಆದೇಶದಲ್ಲಿ 2021-22ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಯೋಜನೆಗೆ ಆಯವ್ಯಯದಲ್ಲಿ ಒದಗಿಸಿದ ಅನುದಾನವನ್ನು ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಹೆಸರಿನಲ್ಲಿ ನಿಯಮಾನುಸಾರ ತೆರೆಯುವ ಹೊಸ ಬ್ಯಾಂಕ್ ಉಳಿತಾಯ ಖಾತೆಗೆ ಜಮಾ ಮಾಡಿ, ನಂತರ ಸದರಿ ಅನುದಾನವನ್ನು ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್ (ಎಸ್.ಎಸ್.ಪಿ) ಮುಖಾಂತರ ಕರೆಯಲಾಗಿರುವ ಅರ್ಜಿಗಳ ಅರ್ಹತೆಯಂತೆ ವಿದ್ಯಾರ್ಥಿಗಳಿಗೆ ನಿಯಮಾನುಸಾರ ನೇರವಾಗಿ ಅವರ ಆಧಾರ ಜೋಡಣೆಯಾಗಿರುವ ಬ್ಯಾಂಕ್ ಖಾತೆಗೆ ಡಿಬಿಟಿ ಮೂಲಕ ಪಾವತಿಸಲು ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮತಿ ನೀಡಿ ಆದೇಶಿಸಲಾಗಿರುತ್ತದೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 28 ಬಿಎಂಎಸ್ 2022,**
**ಬೆಂಗಳೂರು, ದಿನಾಂಕ: 04.03.2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, 2021-22ನೇ ಸಾಲಿಗೆ ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಯೋಜನೆ ಕಾರ್ಯಕ್ರಮ ಲೆಕ್ಕ ಶೀರ್ಷಿಕೆ: 2225-03-283-0-03 (059)ರಡಿ ಒದಗಿಸಿರುವ ರೂ.150.00 ಕೋಟಿಗಳಲ್ಲಿ ಅಮೃತ್ ಸ್ಟಾರ್ಟ್ ಅಪ್ ಯೋಜನೆಗೆ ಈಗಾಗಲೇ ರೂ.10.50 ಕೋಟಿಗಳನ್ನು ಬಿಡುಗಡೆ ಮಾಡಲಾಗಿದ್ದು, ಬಾಕಿ ಇರುವ ರೂ. 139.50 ಕೋಟಿ (ಒಂದು ನೂರ ಮೂವತ್ತೊಂಬತ್ತು ಕೋಟಿ ಐವತ್ತು ಲಕ್ಷಗಳು ಮಾತ್ರ) ಗಳನ್ನು ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಯೋಜನೆಗೆ ಈ ಕೆಳಕಂಡ ಷರತ್ತಿಗಳಿಗೊಳಪಟ್ಟು ಬಿಡುಗಡೆ ಮಾಡಿ ಆದೇಶಿಸಿದೆ.

04/03/2022

**ಷರತ್ತುಗಳು**

1. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್ (ಎಸ್.ಎಸ್.ಪಿ) ಮೂಲಕ ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಯೋಜನೆಗೆ ಕೆ-2 ಮತ್ತು ಡಿಬಿಟಿ ಮಾರ್ಗಸೂಚಿಗಳ ಪ್ರಕಾರ ನಿಯಮಾನುಸಾರ ವಿದ್ಯಾರ್ಥಿಗಳ ಆಧಾರ್ ಜೋಡಣೆ ಆಗಿರುವ ಬ್ಯಾಂಕ್ ಖಾತೆಗಳಿಗೆ ಯೋಜನೆಯ ಮಾರ್ಗಸೂಚಿಗಳ ಪ್ರಕಾರ ಅರ್ಹತೆಯಂತೆ ಪಾವತಿಸುವುದು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಯೋಜನೆ ಅಡಿ ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್ (ಎಸ್.ಎಸ್.ಪಿ) ಮೂಲಕ ಪಾವತಿ ಮಾಡಲಾದ ವಿವರಗಳನ್ನು ಜಿಲ್ಲಾವಾರು, ತಾಲ್ಲೂಕುವಾರು ವಿವರಗಳನ್ನು ಆಯುಕ್ತಾಲಯದ ಅಧಿಕೃತ ಜಾಲತಾಣದಲ್ಲಿ ಪ್ರಕಟಿಸುವುದು.
3. ಯಾವ ಉದ್ದೇಶಕ್ಕಾಗಿ ಅನುದಾನ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕಾಗಿ ಬಳಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 47 ವೆಚ್ಚ-3/2022, ದಿನಾಂಕ:03.02.2022ರಲ್ಲಿ ನೀಡಿರುವ ಸಹಮತಿಯನ್ವಯ ಹಾಗೂ ಇಲಾಖಾ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

Shaheenparveen 04/03/2022

**(ಶಾಹೀನ್ ಪರ್ವೀನ್. ಕೆ)**
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ), ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ, (ವೆಚ್ಚ) ವಿಧಾನಸೌಧ, ಬೆಂಗಳೂರು.
3. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ಖಜನಾಧಿಕಾರಿಗಳು, ರಾಜ್ಯ ಹುಜುರ್ ಖಜಾನೆ, ಬೆಂಗಳೂರು.

**ಪ್ರತಿ ಮಾಹಿತಿಗಾಗಿ:-**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಅಪರ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.
3. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.